ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

(ಅ) ಸಣ್ಣ ನೀರಾವರಿ ಇಲಾಖೆಯಲ್ಲಿ ಈ ರೀತಿಯ ಪ್ರಸ್ತಾವನೆ ಇರುವುದಿಲ್ಲ.

(ಆ) ಉದ್ಭವಿಸುವುದಿಲ್ಲ.

ಐ.ಟಿ.ಐ ಕಾಲೇಜಿಗೆ ಕಟ್ಟಡ ನಿರ್ಮಾಣ

321(858) ಶ್ರೀ ಆನಂದ ಸಿಂಗ್ (ವಿಜಯನಗರ–ಬಳ್ಳಾರಿ) ಮಾನ್ಯ ಕಾರ್ಮಿಕ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಹೊಸಪೇಟೆಯಲ್ಲಿ ಐಟಿಐ ಕಾಲೇಜು ಇದ್ದು, ಸದರಿ ಕಾಲೇಜಿಗೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಕಟ್ಟಡ ಸ್ಥಾಪನೆಗೆ ಯಾವ ಕ್ರಮಗಳನ್ನು ಸರ್ಕಾರ ಕೈಗೊಂಡಿದೆ;

(ಇ) ಕಟ್ಟಡ ಸ್ಥಾಪನೆಗೆ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು?

ಶ್ರೀ ಬಿ.ಎನ್. ಬಚ್ಚೇಗೌಡ (ಕಾರ್ಮಿಕ ಸಚಿವರು)

(ಅ) ಹೌದು.

(ಆ) ಸ್ವಂತ ಕಟ್ಟಡ–ಹೊಂದಲು ಅವಶ್ಯವಾಗಿರುವ ಟಿ.ಬಿ. ಡ್ಯಾಂ ಪ್ರಾಧಿಕಾರಕ್ಕೆ ಸೇರಿದ ಜಮೀನನ್ನು ಇಲಾಖೆಯ ವಶಕ್ಕೆ ಪಡೆಯಲು ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ಟಿ.ಬಿ. ಡ್ಯಾಂ ಪ್ರಾಧಿಕಾರದಿಂದ ಮಂಜೂರಾತಿ ನಿರೀಕ್ಷಿಸಲಾಗಿದೆ.

(ಇ) ಹೊಸಪೇಟೆಯಲ್ಲಿ ಸರ್ಕಾರಿ ಜಮೀನು ಸಿಗುವುದು ಕಷ್ಟಕರವಾಗಿರುವುದರಿಂದ ಕಟ್ಟಡ ಸ್ಥಾಪನೆಗೆ ವಿಳಂಬವಾಗಿರುತ್ತದೆ. ಜಮೀನು ಸಿಕ್ಕಿದ ನಂತರ ಕಟ್ಟಡ ನಿರ್ಮಾಣಕ್ಕೆ ಅನುದಾನ ಲಭ್ಯವಾದಲ್ಲಿ ಕಟ್ಟಡ ಕಾಮಗಾರಿ ಪ್ರಾರಂಭಿಸಲಾಗುವುದು.

ಮೂಲಭೂತ ಸೌಕರ್ಯ

322(678) ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ರಾಜ್ಯದಲ್ಲಿರುವ ಸಣ್ಣ ಕೈಗಾರಿಕೆಗಳು ವಿದ್ಯುತ್ ಅಭಾವದಿಂದ ಮತ್ತು ಮೂಲಭೂತ ಸೌಕರ್ಯಗಳ ಕೊರತೆಯಿಂದ ಮುಚ್ಚುವ ಹಂತಕ್ಕೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸರ್ಕಾರ ನಷ್ಟದಲ್ಲಿರುವ ಸಣ್ಣ ಕೈಗಾರಿಕೆಗಳಿಗೆ ಯಾವ ರೀತಿ ಪ್ರೋತ್ಸಾಹ ನೀಡಲಾಗುತ್ತಿದೆ? (ವಿವರ ನೀಡುವುದು);

ಶ್ರೀನರಸಿಂಹ ನಾಯಕ್ ರಾಜುಗೌಡ (ಸಣ್ಣ ಕೈಗಾರಿಕೆ ಸಚಿವರು)

(ಅ) ಇಲ್ಲ

(ಆ) ನಷ್ಟದಲ್ಲಿರುವ ಸಣ್ಣ ಕೈಗಾರಿಕೆಗಳನ್ನು ಪ್ರೋತ್ಸಾಹಿಸಲು ಸರ್ಕಾರದ ಯಾವುದೇ ನಿರ್ದಿಷ್ಟ ಯೋಜನೆಗಳಿರುವುದಿಲ್ಲ. ಆದಾಗ್ಯೂ ಸರ್ಕಾರಿ ಆದೇಶ ಸಂಖ್ಯೆ: ಸಿಐ 167 ಎಸ್ ಪಿಐ 2001, ದಿನಾಂಕ: 25-2-2002 ಮತ್ತು ಸಿಐ 2 ಬಿಐಎಫ್ 2010, ದಿನಾಂಕ: 20-10-2010ರನ್ವಯ ರೋಗಗ್ರಸ್ಥ ಸಣ್ಣ ಕೈಗಾರಿಕೆಗಳ ಪುನಃಶ್ಚೇತನಕ್ಕಾಗಿ ಕೆಳಕಂಡ ರಿಯಾಯಿತಿ ಮತ್ತು ಸವಲತ್ತುಗಳನ್ನು ನೀಡಲಾಗುತ್ತಿದೆ.

ಘಟಕದ ಪುನಶ್ಚೇತನ ಯೋಜನಾ ವೆಚ್ಚದ ಶೇ. 25ರಷ್ಟು ರೂ. 02.50 ಲಕ್ಷಗಳಿಗೆ ಮಿತಿಗೊಳಪಟ್ಟು ಬಡ್ಡಿರಹಿತ ಬೀಜಧನವನ್ನು (NEF ಮಾರ್ಗಸೂಚಿಯನ್ವಯ) ಸಾಲದ ರೂಪದಲ್ಲಿ ಒದಗಿಸುವುದು.

ಕೆಐಎಡಿಬಿ/ಕೆಎಸ್ಎಸ್ಐಡಿಸಿ ಮತ್ತು ಕಿಯೋನಿಕ್ಸ್‌ಗಳ ಬಾಕಿ ಸಾಲ ಪಾವತಿಯನ್ನು ಒಂದು ವರ್ಷದ ಋಣಸ್ಥಗಿತದೊಂದಿಗೆ ಮುಂದೂಡಿ ಅದನ್ನು ನಾಲ್ಕು ವಾರ್ಷಿಕ ಕಂತುಗಳಲ್ಲಿ ಬಡ್ಡಿರಹಿತವಾಗಿ ಪಾವತಿಸಲು ಅವಕಾಶ

ಅಭಿವೃದ್ಧಿ ಸಾಲ ಮರುಪಾವತಿಯನ್ನು ಕೈಗಾರಿಕೆಯು ಪುನಃಶ್ಚೇತನಗೊಳಿಸಿದ ನಂತರ ಮೂರು ವರ್ಷದ ಅವಧಿಯಲ್ಲಿ ಬಡ್ಡಿ ಇಲ್ಲದೇ ಪಾವತಿಸಲು ಅವಕಾಶ

ತೆರಿಗೆ ಸಂಬಂಧಿತ ಸೌಲಭ್ಯಗಳು; ತೆರಿಗೆ ಬಾಕಿಯನ್ನು 6 ಅರ್ಧ ವಾರ್ಷಿಕ ಕಂತುಗಳಲ್ಲಿ ಪ್ರತಿ ತಿಂಗಳಿಗೆ ಶೇ. 0.50 ರಂತೆ ಬಡ್ಡಿ ಸಹಿತ ಮರುಪಾವತಿ ; ಹಾಗೂ ಮುಂದಿನ ಮೂರು ವರ್ಷಗಳಲ್ಲಿ ಪಾವತಿಸುವ ಮಾಹೆಯ ತೆರಿಗೆಯಲ್ಲಿ ಶೇ. 50 ರಷ್ಟು ಬಡ್ಡಿರಹಿತವಾಗಿ ಮುಂದೂಡಿ ನಂತರ 3 ವಾರ್ಷಿಕ ಕಂತುಗಳಲ್ಲಿ ಆಯಾ ಸಾಲಿನ ತೆರಿಗೆಯ ಜೊತೆಯಲ್ಲಿ ಮರುಪಾವತಿ ಮಾಡಲು ಅವಕಾಶ ನೀಡಲಾಗಿದೆ ಮತ್ತು ಘಟಕವು ಮುಚ್ಚಿರುವ ಅವಧಿಗೆ ಬಡ್ಡಿಯನ್ನು ವಿಧಿಸುವಂತಿಲ್ಲ.